ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ
ಕರ್ನಾಟಕ ಸರ್ಕಾರ
ಬಹುಮಹಡಿ ಕಟ್ಟಡ, ಗೇಟ್-4
ಪಿ.ಬಿ. ನಂ. 5327
ಡಾ|| ಬಿ.ಆರ್. ಅಂಬೇಡ್ಕರ್ ವೀಧಿ
ಬೆಂಗಳೂರು-560 001
ದೂರವಾಣಿ ಸಂ. : 080-22258933

04 MAY 2017

ಕರ್ನಾಟಕ ಸರ್ಕಾರ

ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ

ಸಂಖ್ಯೆ:ನಗ್ರಾಯೋನಿ:ಕಟ್ಟಡ ಪರವಾನಿಗೆ:ಸುತ್ತೋಲೆ:2015–16

ಸುತ್ತೋಲೆ

ವಿಷಯಃ– ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರನ್ವಯ ನಗರ/ಪಟ್ಟಣಗಳಿಗೆ ಸ್ಥಳೀಯ ಯೋಜನಾ ಪ್ರದೇಶವೆಂದು ಘೋಷಿಸುವ ಮುಂಚಿತವಾಗಿಯೇ ಭೂ ಪರಿವರ್ತನೆಯಾದ ಜಮೀನುಗಳನ್ನು ವಿಭಜಿಸಿ ಸ್ಥಳೀಯ ಸಂಸ್ಥೆಯಲ್ಲಿ ಖಾತೆ ತೆರೆದಿರುವ ನಿವೇಶನಗಳಿಗೆ ಕಟ್ಟಡ ನಿರ್ಮಾಣ ಮಾಡುವ ಸಂಬಂಧ ತಾಂತ್ರಿಕ ಅಭಿಪ್ರಾಯ ನೀಡುವ ಬಗ್ಗೆ.

ಉಲ್ಲೇಖಃ– 1) ಈ ಕಛೇರಿಯಿಂದ ಹೊರಡಿಸಿರುವ ಸುತ್ತೋಲೆ ಸಂ:ನಗ್ರಾಯೋನಿ/ಕಟ್ಟಡ ಪರವಾನಿಗೆ/ಸುತ್ತೋಲೆ/2015–16 ದಿನಾಂಕ:22–01–2016.

2) ದಿನಾಂಕ:24–01–2017 ರಂದು ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆ ನಡಾವಳಿ.

****

ಉಲ್ಲೇಖ (1)ರ ಸುತ್ತೋಲೆಯಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರನ್ವಯ ನಗರ/ಪಟ್ಟಣಗಳಿಗೆ ಪ್ರಾಧಿಕಾರ ರಚನೆಯ ಪೂರ್ವದಲ್ಲಿ ಹಾಗೂ ರಚನೆ ನಂತರ ಭೂ ಪರಿವರ್ತನೆಯಾದ ಜಮೀನುಗಳಿಗೆ ಸಂಬಂಧಪಟ್ಟ ಪ್ರಾಧಿಕಾರಗಳಿಂದ ವಿನ್ಯಾಸ ನಕ್ಷೆ ಅನುಮೋದನೆ ಪಡೆಯದೇ ಅನಧಿಕೃತವಾಗಿ ವಿಭಜಿಸಿ, ಸ್ಥಳೀಯ ಸಂಸ್ಥೆಯಲ್ಲಿ ಖಾತೆ ತೆರೆದಿರುವ ನಿವೇಶನಗಳಿಗೆ ಕಟ್ಟಡ ನಿರ್ಮಾಣ ಮಾಡುವ ಸಂಬಂಧ ತಾಂತ್ರಿಕ ಅಭಿಪ್ರಾಯವನ್ನು ನೀಡುವುದು ಸಮಂಜಸವಲ್ಲದ ಕಾರಣ ಇಂತಹ ನಿವೇಶನಗಳಲ್ಲಿ ಕಟ್ಟಡ ಪರವಾನಿಗೆ ನೀಡಲು ತಾಂತ್ರಿಕ ಅಭಿಪ್ರಾಯ ನೀಡಬಾರದೆಂದು ಸೂಚಿಸಲಾಗಿದೆ. ಹಾಗೂ ಈ ಪ್ರಕರಣಗಳನ್ನು ಅಕ್ರಮ–ಸಕ್ರಮ ಯೋಜನೆಯಲ್ಲಿ ಪರಿಶೀಲಿಸಬಹುದಾಗಿ ತಿಳಿಸಲಾಗಿದೆ.

ಸದರಿ ಸುತ್ತೋಲೆಯಲ್ಲಿನ ನಿರ್ದೇಶನಗಳನ್ನು ಪಾಲಿಸುವಲ್ಲಿನ ಸಮಸ್ಯೆಗಳನ್ನು ವಿವರಿಸಿ ಕೆಲವು ಪ್ರಾಧಿಕಾರಗಳು ಸ್ಪಷ್ಟೀಕರಣ, ಮಾರ್ಗದರ್ಶನವನ್ನು ನೀಡುವಂತೆ ಕೋರುತ್ತಿರುವ ಬಗ್ಗೆ ಉಲ್ಲೇಖ (2)ರ ಸಭೆಯಲ್ಲಿ ಕೂಲಂಕುಷವಾಗಿ ಚರ್ಚಿಸಿದ್ದು, ಸದರಿ ಸಭೆಯ ನಿರ್ಣಯದನ್ವಯ ಗ್ರಾಮಠಾಣಾ ವ್ಯಾಪ್ತಿಯಲ್ಲಿನ ನಿವೇಶನಗಳಿಗೆ ಹಾಗೂ ಕರ್ನಾಟಕ ಪೌರ ಕಾಯ್ದೆ, 1964ರ ಕಲಂ 387 ದಿನಾಂಕ:08–12–1976 ರಿಂದ ಜಾರಿಯಲ್ಲಿದ್ದು, ಸದರಿ ದಿನಾಂಕಃ 08–12–1976ರ ಪೂರ್ವದಲ್ಲಿ ಭೂ ಪರಿವರ್ತನೆಯಾದ ಜಮೀನುಗಳಲ್ಲಿ ಸ್ಥಳೀಯ ಸಂಸ್ಥೆಯಲ್ಲಿ ಖಾತೆ ತೆರೆದಿರುವ ನಿವೇಶನಗಳಿಗೆ ಕಟ್ಟಡ ಪರವಾನಿಗೆ ನೀಡುವ ಸಂಬಂಧ ತಾಂತ್ರಿಕ ಅಭಿಪ್ರಾಯ ನೀಡಬಹುದಾಗಿದೆ.

ಹಾಗೂ ದಿನಾಂಕ:08–12–1976 ರ ಪೂರ್ವದಲ್ಲಿ ಭೂ ಪರಿವರ್ತನೆಯಾಗದ ನಿವೇಶನಗಳಿಗೆ ಸ್ಥಳೀಯ ಸಂಸ್ಥೆಯಲ್ಲಿ ಖಾತೆ ತೆರೆದಿದ್ದರೆ, ನಿಯಮಾನುಸಾರ ಭೂ ಪರಿವರ್ತನೆ ಆದೇಶವನ್ನು ಕಂದಾಯ ಇಲಾಖೆಯಿಂದ ಪಡೆದುಕೊಂಡ ನಂತರ ಅಂತಹ ನಿವೇಶನಗಳಿಗೆ ಕಟ್ಟಡ ಪರವಾನಿಗೆ ನೀಡಲು ತಾಂತ್ರಿಕ ಅಭಿಪ್ರಾಯ ನೀಡಬಹುದಾಗಿ ಸಹ ತಿಳಿಸಲಾಗಿದೆ.

ಸಹಿ:

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು

2.....

nk.pa.sec.285

ಕಾಲನಗರ ಯೋಜನಾ ಪ್ರಾಧಿಕಾರ
ಒಳ ಬಂದ ಪತ್ರ
ಸಂಖ್ಯೆ: 73
ದಿ: 16/5/2017

ಪ್ರತಿಯನ್ನು:

1. ನಗರ ಮತ್ತು ಗ್ರಾಮಾಂತರ ಯೋಜನಾ ಹೆಚ್ಚುವರಿ ನಿರ್ದೇಶಕರು, ವಲಯ ಕಛೇರಿ, ಧಾರವಾಡ.
2. ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು, ವಿಭಾಗೀಯ ಕಛೇರಿ, ಗುಲ್ಬರ್ಗಾ/ ಮೈಸೂರು/ ಬೆಂಗಳೂರು.
3. ಆಯುಕ್ತರು, ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು.
4. ಸದಸ್ಯ-ಕಾರ್ಯದರ್ಶಿಗಳು/ ಮುಖ್ಯಾಧಿಕಾರಿಗಳು/ ಪೌರಾಯುಕ್ತರು, ಎಲ್ಲಾ ನಗರ ಯೋಜನಾ ಪ್ರಾಧಿಕಾರಗಳು/ ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರಗಳು.
5. ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಎಲ್ಲಾ ಶಾಖಾ ಕಛೇರಿಗಳಿಗೆ.
6. ಕೇಂದ್ರ ಕಛೇರಿಯ ಎಲ್ಲಾ ಪತ್ರಾಂಕಿತ ಅಧಿಕಾರಿಗಳಿಗೆ/ತಾಂತ್ರಿಕ ಸಿಬ್ಬಂದಿಗಳಿಗೆ.
7. ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಆಪ್ತ ಶಾಖೆಗೆ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು

nk.pa.sec.286